ಸಾಕ್ಷಿಯನ್ನು ದಿನಾಂಕ **11-10-2023** ರಂದು ಕರೆದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರವಾಗಿ ಶ್ರೀ ಎನ್.ಕೆ. ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿಯಾಗಿದ್ದು ನನ್ನ ಸಾಕ್ಷ್ಯದ ಹೇಳಿಕೆಯನ್ನು ಪ್ರಮಾಣಪತ್ರದ ರೂಪದಲ್ಲಿ ನನ್ನ ಹೇಳಿಕೆಯಂತೆ ತಯಾರಿಸಿ ಸಲ್ಲಿಸಿದ್ದು, ಅದರಲ್ಲಿರುವ ವಿಚಾರಗಳು ಸತ್ಯವಾಗಿರುತ್ತವೆ. ಸದರಿ ನನ್ನ ಪ್ರಮಾಣಪತ್ರದಲ್ಲಿರುವ ಸಹಿ ನನ್ನದೇ ಇರುತ್ತದೆ.

**ನಾನು ಅರ್ಜಿ ನಂಬ್ರ 13 ರಡಿಯಲ್ಲಿ ದಿನಾಂಕ 24-09-2019 ರ ಆದೇಶದನ್ವಯ ಮತ್ತು ಅರ್ಜಿ ನಂಬ್ರ 15 ರಂತೆ ದಿನಾಂಕ 21-12-2021 ರ ಆದೇಶದನ್ವಯ ನಾನು ನನ್ನ ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ.**

ನನ್ನ ವಾದಕ್ಕೆ ಪೂರಕವಾಗಿ ದಿನಾಂಕ 05-08-2010 ರ ಜೊತೆ ಹಕ್ಕು ಖುಲಾಸೆ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು, ದಾವಾ ಆಸ್ತಿಗೆ ಸಂಬಂಧಪಟ್ಟ ನಾಲ್ಕು ಪಹಣಿ ಪತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ-2 ಎಂದು , ದಿನಾಂಕ 24-09-2019 ರಂದು ವಾದಿಯು ಅವರ ಮಗನಿಗೆ ನೀಡಿದ ಜನರಲ್ ಪವರ್ ಆಫ್ ಅಟಾರ್ನಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ದಿನಾಂಕ 06-02-2009 ಪ್ರತಿವಾದಿಗೆ ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

( ವಕೀಲರ ಕೋರಿಕೆ ಮೇರೆಗೆ ಸಾಕ್ಷಿಯ ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ನೀಡಲಾಯಿತು. )

ನನ್ನ ಉಕ್ತಲೇಖನದ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ.ಹೆ.ಕೇ.ಸರಿ ಇದೆ.

ಸಾಕ್ಷಿಯ ಸಹಿ

ವ್ಯವಹಾರಿಕ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾಯಿಕ ದಂಡಾಧಿಕಾರಿಯವರು, ಸುಳ್ಯ, ದ.ಕ.